ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 1 ಎಸ್‌ಆರ್‌ಪಿ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ: 17.02.2020.

## ಸುತ್ತೋಲೆ

ವಿಷಯ: 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ವೇತನ ಪುನರ್ ನಿಗದಿಪಡಿಸಿರುವುದನ್ನು ಸರ್ಕಾರಿ ನೌಕರರ ಮೂಲ ಸೇವಾ ಪುಸ್ತಕಗಳಲ್ಲಿ ಸೂಕ್ತ ರೀತಿಯಲ್ಲಿ ನಮೂದಿಸುವ ಬಗ್ಗೆ.

ಉಲ್ಲೇಖ:
1. ದಿನಾಂಕ:01.03.2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ2018
2. ದಿನಾಂಕ: 19.04.2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018
3. ದಿನಾಂಕ: 19.04.2018ರ ಸರ್ಕಾರಿ ಅಧಿಸೂಚನೆ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018
4. ದಿನಾಂಕ: 24.04.2018ರ ಸರ್ಕಾರಿ ಆದೇಶ ಸಂಖ್ಯೆ: ಆಇ 33 ಪಿಇಎನ್ 2018
5. ದಿನಾಂಕ: 09.05.2018ರ ಸುತ್ತೋಲೆ ಸಂಖ್ಯೆ: ಆಇ 6 ಎಸ್‌ಆರ್‌ಪಿ 2018.

*****

ಉಲ್ಲೇಖ(1)ರ ದಿನಾಂಕ:01.03.2018ರ ಸರ್ಕಾರಿ ಆದೇಶದಲ್ಲಿ 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನಂತೆ, ರಾಜ್ಯ ಸರ್ಕಾರಿ ನೌಕರರ ವೇತನ, ಭತ್ಯೆ ಮತ್ತು ಪಿಂಚಣಿಗಳನ್ನು ದಿನಾಂಕ: 01.07.2017ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಪರಿಷ್ಕೃತ ವೇತನ ಶ್ರೇಣಿಗಳನ್ನು ವೇತನ ಪುನರ್ ನಿಗದಿಪಡಿಸುವ ಬಗ್ಗೆ ಹಾಗೂ ಪಿಂಚಣಿ ಪರಿಷ್ಕರಣೆಯ ಬಗ್ಗೆ ವಿಸ್ತೃತವಾಗಿ ಉಲ್ಲೇಖ(2)ರಲ್ಲಿ ತಿಳಿಸಿರುವ ದಿನಾಂಕ: 19.04.2018ರ ಆದೇಶದಲ್ಲಿ ವಿವರವಾದ ಸೂಚನೆ ಹಾಗೂ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಸದರಿ ಆದೇಶದ ಕಂಡಿಕೆ (5)ರಲ್ಲಿ ರಾಜ್ಯ ಸರ್ಕಾರಿ ನೌಕರರ ವೇತನವನ್ನು ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳು, 2018ರ ಅವಕಾಶಗಳನ್ವಯ ದಿನಾಂಕ:30.06.2018ರೊಳಗೆ ನಿಗದಿಪಡಿಸಿ ಈ ಬಗ್ಗೆ ನೌಕರರ ಮೂಲ ಸೇವಾ ಪುಸ್ತಕದಲ್ಲಿ ಸೂಕ್ತ ರೀತಿಯಲ್ಲಿ ನಮೂದಿಸಲು ಕ್ರಮವಹಿಸುವಂತೆ ನಿರ್ದೇಶನಗಳನ್ನು ನೀಡಲಾಗಿರುತ್ತದೆ. ಮುಂದುವರೆದು, ಇದೇ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದಿಂದ ಹೊರಡಿಸಲಾದ ಉಲ್ಲೇಖ(5)ರ ದಿನಾಂಕ:

09.05.2018ರ ಸುತ್ತೋಲೆಯಲ್ಲಿ ಕೂಡ 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ವೇತನ ಪುನರ್ ನಿಗದಿಪಡಿಸಿ ಪರಿಷ್ಕೃತ ವೇತನ ಶ್ರೇಣಿಯಲ್ಲಿ ವೇತನ ಪಾವತಿಸಲು ಸೂಕ್ತ ಸೂಚನೆಗಳನ್ನು ನೀಡಲಾಗಿರುತ್ತದೆ.

**ಆದರೆ, ವೇತನ ನಿಗದೀಕರಣದ ಬಗ್ಗೆ ಸರ್ಕಾರದ ಅಭಿಪ್ರಾಯ ಕೋರಿ ಸಲ್ಲಿಸಲಾಗುವ ಹಲವಾರು ಪ್ರಕರಣಗಳಲ್ಲಿ, ಸರ್ಕಾರಿ ನೌಕರರ ವೇತನವನ್ನು 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಪುನರ್ ನಿಗದಿಪಡಿಸಿದ ಬಗ್ಗೆ ಸಂಬಂಧಿಸಿದ ನೌಕರರ ಮೂಲ ಸೇವಾ ಪುಸ್ತಕದಲ್ಲಿ ಸೂಕ್ತ ರೀತಿಯಲ್ಲಿ ನಮೂದು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದು ಸಂಬಂಧಿಸಿದ ನೌಕರರಿಗೆ ವೇತನ ಬಾಕಿ ಪಾವತಿಸುವಲ್ಲಿ ವಿಳಂಬಕ್ಕೆ ಕಾರಣವಾಗುವುದಲ್ಲದೇ ಪಿಂಚಣಿ ನಿಷ್ಕರ್ಷಣೆ ಮಾಡುವಲ್ಲಿಯೂ ಸಹ ಅನಗತ್ಯ ವಿಳಂಬ ಮತ್ತು ಹಲವು ಆಡಳಿತಾತ್ಮಕ ಸಮಸ್ಯೆಗಳಿಗೆ ಕಾರಣವಾಗುತ್ತದೆ.**

ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ಭಾಗ-VIರ ಅಧ್ಯಾಯ-XXVರಲ್ಲಿನ ನಿಯಮಗಳಲ್ಲಿ ಸರ್ಕಾರಿ ನೌಕರರ ಸೇವಾ ಪುಸ್ತಕಗಳ ನಿರ್ವಹಣೆಯ ಬಗ್ಗೆ ವಿಸ್ತೃತವಾದ ಅವಕಾಶಗಳನ್ನು ಕಲ್ಪಿಸಲಾಗಿರುತ್ತದೆ. ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಗಳ ನಿಯಮ, 398ರಲ್ಲಿನ ಅವಕಾಶಗಳ ಪ್ರಕಾರ ರಾಜ್ಯ ಸರ್ಕಾರಿ ನೌಕರನ ಸೇವಾ ವಿಷಯಗಳಿಗೆ ಸಂಬಂಧಿಸಿದ ಪ್ರತಿ ಹಂತವನ್ನೂ ಸೂಕ್ತ ರೀತಿಯಲ್ಲಿ ಮೂಲ ಸೇವಾ ಪುಸ್ತಕದಲ್ಲಿ ನಮೂದು ಮಾಡತಕ್ಕದ್ದಾಗಿರುತ್ತದೆ. ಆದರೆ, ಸರ್ಕಾರದ ಸೂಚನೆಯ ಹೊರತಾಗಿಯೂ 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ವೇತನ ಪುನರ್ ನಿಗದಿಪಡಿಸಿರುವುದನ್ನು ಸಂಬಂಧಿಸಿದ ಸರ್ಕಾರಿ ನೌಕರರ ಮೂಲ ಸೇವಾ ಪುಸ್ತಕದಲ್ಲಿ ಸೂಕ್ತ ರೀತಿಯಲ್ಲಿ ನಮೂದಿಸದೇ ಇರುವುದು ಹಾಗೂ ಸರ್ಕಾರದಿಂದ ಸ್ಪಷ್ಟೀಕರಣದ ಅಗತ್ಯವಿದ್ದರೂ ದೀರ್ಘಕಾಲದ ನಂತರ ಆದೇಶ ಕೋರಿ ಪ್ರಸ್ತಾವನೆ ಸಲ್ಲಿಸುವುದು, ಸಂಬಂಧಿಸಿದ ಅಧಿಕಾರಿ ಮತ್ತು ನೌಕರರ ಕಾರ್ಯಲೋಪವೆಂದೇ ಪರಿಗಣಿಸತಕ್ಕದ್ದಾಗಿರುತ್ತದೆ.

ಆದುದರಿಂದ, 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ಸರ್ಕಾರಿ ನೌಕರರ ವೇತನ ಪುನರ್ ನಿಗದಿಪಡಿಸಿರುವುದನ್ನು ಸಂಬಂಧಿಸಿದ ನೌಕರರ ಮೂಲ ಸೇವಾ ಪುಸ್ತಕದಲ್ಲಿ ಸೂಕ್ತ ರೀತಿಯಲ್ಲಿ ನಮೂದು ಮಾಡುವಂತೆ ಹಾಗೂ ಹಿಂದಿನ ವೇತನ ಪರಿಷ್ಕರಣೆಯ ನಮೂದುಗಳೂ ಕೂಡ ಸರಿಯಾಗಿರುವ ಬಗ್ಗೆ ಪರಿಶೀಲಿಸಿ ಕ್ರಮವಹಿಸುವಂತೆ ಇಲಾಖಾ ಮುಖ್ಯಸ್ಥರು ಮತ್ತು ಇಲಾಖಾ ಕಾರ್ಯದರ್ಶಿಗಳು ತಮ್ಮ ಅಧೀನದಲ್ಲಿ ಬರುವ ಸಂಬಂಧಿಸಿದ ಅಧಿಕಾರಿ/ನೌಕರರಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡುವಂತೆ ಹಾಗೂ ಮೂಲ ಸೇವಾ ಪುಸ್ತಕಗಳ ನಿರ್ವಹಣೆಯನ್ನು ಕಾಲಕಾಲಕ್ಕೆ ಪರಿಶೀಲಿಸಲು ಹಾಗೂ ಅನಗತ್ಯ ವಿಳಂಬವನ್ನು ತಡೆಗಟ್ಟಲು ಕಟ್ಟುನಿಟ್ಟಿನ ಸೂಚನೆಗಳನ್ನೂ ಸಹ ನೀಡುವಂತೆ ಕೋರಿದೆ.

ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳು, 2018ರ ನಿಯಮ 7(4)ರ ಪ್ರಕರಣಗಳನ್ನು ಹೊರತುಪಡಿಸಿ ಇತರೆ ಪ್ರಕರಣಗಳಲ್ಲಿ ಸರ್ಕಾರಿ ನೌಕರರ ಮೂಲ ಸೇವಾ ಪುಸ್ತಕಗಳಲ್ಲಿ

ಸೂಕ್ತ ರೀತಿಯಲ್ಲಿ ನಮೂದುಗಳು ಇಲ್ಲವಾದ ಕಾರಣ ಅಂತಹ ನೌಕರರಿಗೆ ಸರ್ಕಾರದಿಂದ ಪಾವತಿಸಬೇಕಾದ ವೇತನ/ಪಿಂಚಣಿ ಬಾಕಿಯ ಮೇಲೆ ಬಡ್ಡಿ ಪಾವತಿಸುವ ಸಂದರ್ಭ ಉಂಟಾದಲ್ಲಿ, ಮೂಲ ಸೇವಾ ಪುಸ್ತಕ ನಿರ್ವಹಣೆ ಜವಾಬ್ದಾರಿ ಇರುವ ಸಂಬಂಧಿಸಿದ ಅಧಿಕಾರಿ/ನೌಕರರುಗಳನ್ನು ಅವರ ಗುರುತರ ಕರ್ತವ್ಯ ನಿರ್ಲಕ್ಷತೆಗಾಗಿ ಹೊಣೆಗಾರರನ್ನಾಗಿ ಮಾಡಲು ಕೂಡ ಕ್ರಮವಹಿಸುವಂತೆ ಎಲ್ಲಾ ಇಲಾಖಾ ಮುಖ್ಯಸ್ಥರನ್ನು ಮತ್ತು ಇಲಾಖಾ ಕಾರ್ಯದರ್ಶಿಗಳನ್ನು ಕೋರಿದೆ.

(ಡಾ: ಪಿ.ಸಿ.ಜಾಫರ್)
ಸರ್ಕಾರದ ಕಾರ್ಯದರ್ಶಿ(ವೆಚ್ಚ)
ಆರ್ಥಿಕ ಇಲಾಖೆ

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿಕಟ್ಟಡ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
8. ಎಲ್ಲಾ ಪ್ರಾದೇಶಿಕ ಆಯುಕ್ತರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
11. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
12. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
13. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
14. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
15. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
18. ಪ್ರಾಜೆಕ್ಟ್‌ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
21. ವಾರಪತ್ರ/ಶಾಖೆಯ ರಕ್ಷಾ ಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**